## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ**: ಎಂ.ಎಸ್ ಕಾಯ್ದೆ-2013 ರ ಸೆಕ್ಷನ್ 24 ರಂತೆ ಪ್ರತಿ ಜಿಲ್ಲಾ ಮಟ್ಟದಲ್ಲಿ ನಡೆಯುವ ಜಿಲ್ಲಾ ಜಾಗೃತಿ ಸಮಿತಿಗೆ ಗುರುತಿಸಲ್ಪಟ್ಟ ಇಬ್ಬರು ಮಹಿಳೆ ಮತ್ತು ಒಬ್ಬ ಪುರುಷ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳನ್ನು ಕಡ್ಡಾಯವಾಗಿ ಶಾಶ್ವತ ಆಹ್ವಾನಿತರೆಂದು ನಾಮನಿರ್ದೇಶನ ಮಾಡುವ ಬಗ್ಗೆ.

**ಓದಲಾಗಿದೆ**: ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ ಇವರ ಏಕ ಕಡತ ಸಂಖ್ಯೆ: KSCSK/MS13/ OTH/3 / 2023-Sec-KSCSK (Computer No. 1157304).

*****

**ಪ್ರಸ್ತಾವನೆ:-**

ಮೇಲೆ ಓದಲಾದ ಏಕ ಕಡತದಲ್ಲಿ ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳಿಗೆ ಪುನರ್ವಸತಿ ಯೋಜನೆಗಳ ಬಲವರ್ಧನೆ ಕುರಿತು ದಿನಾಂಕ: 02.08.2023 ಮತ್ತು 03.08.2023 ರಂದು ರಾಜ್ಯ ಮಟ್ಟದಲ್ಲಿ ನಡೆದ 2 ದಿನದ ಕಾರ್ಯಗಾರದಲ್ಲಿ ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳ ಜೊತೆ ನೇರ ಸಂವಾದ ಕಾರ್ಯಕ್ರಮದಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಈಗಾಗಲೇ ಎಂ.ಎಸ್ ಕಾಯ್ದೆ-2013 ರ ಸೆಕ್ಷನ್ 24 ರಂತೆ ಪ್ರತಿ ಜಿಲ್ಲಾ ಮಟ್ಟದಲ್ಲೂ ನಡೆಯುವ ಜಿಲ್ಲಾ ಜಾಗೃತಿ ಸಮಿತಿಯಲ್ಲಿ 4 ಜನ ಸದಸ್ಯರಿದ್ದು ಮತ್ತು ಉಪವಿಭಾಗ ಮಟ್ಟದಲ್ಲಿ 2 ಸದಸ್ಯರಿರುತ್ತಾರೆ. ಇನ್ನು ಮುಂದೆ ನಡೆಯುವ ಜಿಲ್ಲಾ ಮತ್ತು ಉಪ-ವಿಭಾಗ ಮಟ್ಟದ ಸಭೆಗಳಲ್ಲಿ ಗುರುತಿಸಲ್ಪಟ್ಟ 2 ಮಹಿಳೆ ಮತ್ತು 1 ಪುರುಷ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳನ್ನು ಕಡ್ಡಾಯವಾಗಿ ಶಾಶ್ವತ ಆಹ್ವಾನಿತರೆಂದು ನಾಮ ನಿರ್ದೇಶನ ಮಾಡಿ ಪ್ರತಿ ಸಭೆಗೂ ಆಹ್ವಾನಿಸಿ ಸಭೆಗಳನ್ನು ನಡೆಸಬೇಕೆಂದು ನಿರ್ಣಯಿಸಿ ಸರ್ಕಾರಿ ಆದೇಶ ಹೊರಡಿಸಲು ಸೂಕ್ತ ಪ್ರಸ್ತಾವನೆಯನ್ನು ಸಲ್ಲಿಸುವಂತೆ ನಿರ್ಣಯಿಸಲಾಗಿದೆ. ಅದರಂತೆ ಸರ್ಕಾರದಿಂದ ಸೂಕ್ತ ಆದೇಶ ಹೊರಡಿಸುವಂತೆ ಏಕ ಕಡತದ ಪ್ರಸ್ತಾವನೆಯಲ್ಲಿ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ ಇವರು ಕೋರಿದ್ದಾರೆ.

ಮೇಲಿನ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: SWD/SDC/243/2023,**
**ಬೆಂಗಳೂರು, ದಿನಾಂಕ:06-11-2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಎಂ.ಎಸ್ ಕಾಯ್ದೆ-2013 ರ ಸೆಕ್ಷನ್ 24 ರಂತೆ ಪ್ರತಿ ಜಿಲ್ಲಾ ಮಟ್ಟದಲ್ಲಿ ನಡೆಯುವ ಜಿಲ್ಲಾ ಜಾಗೃತಿ ಸಮಿತಿ ಮತ್ತು

S.V
06/11/2023

ಉಪವಿಭಾಗ ಮಟ್ಟದಲ್ಲಿ ನಡೆಯುವ ಜಾಗೃತಿ ಸಮಿತಿಗೆ ಗುರುತಿಸಲ್ಪಟ್ಟ ಇಬ್ಬರು- ಮಹಿಳೆ ಮತ್ತು ಒಬ್ಬ-ಪುರುಷ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳನ್ನು ಕಡ್ಡಾಯವಾಗಿ ಶಾಶ್ವತ ಆಹ್ವಾನಿತರೆಂದು ಜಿಲ್ಲಾಧಿಕಾರಿಗಳು ನಾಮ ನಿರ್ದೇಶನ ಮಾಡಿ, ಮುಂದೆ ನಡೆಯುವ ಪ್ರತಿ ಸಭೆಗೂ ಆಹ್ವಾನಿಸಿ ಸಭೆಗಳನ್ನು ನಡೆಸಬೇಕೆಂದು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತುಅವರ ಹೆಸರಿನಲ್ಲಿ,

SV 06/11/2023
(ಕಲಾವತಿ ಎಸ್.ವಿ)
ಸರ್ಕಾರದ ಉಪ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ :-

1. ಮಹಾಲೇಖಪಾಲರು, ಲೆಕ್ಕ ಪತ್ರ: ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮ, ಬೆಂಗಳೂರು.
5. ಎಲ್ಲಾ ಜಿಲ್ಲಾಧಿಕಾರಿಗಳು
6. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
7. ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ
8. ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ,
9. ಎಲ್ಲಾ ತಾಲ್ಲೂಕು ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು. (ಕ್ರ.ಸಂ. 5 ರಿಂದ 9 ರವರಗೆ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು ಇವರ ಮುಖಾಂತರ)
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿ ಮಾಹಿತಿಗಾಗಿ :-**

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಧಾನಸಸೌಧ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ.

***